ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 19/11/2019

# ಕೆಆರ್ ಪೇಟೆಯಲ್ಲಿ ಘರ್ಷಣೆ

## ಚಪ್ಪಲಿ ತೂರಾಟ: ಸಚಿವರಿಗೆ ಘಾಸಿ

- ಗೋಕಾಕ್‌ನಲ್ಲಿ ಕಣಕ್ಕಿಳಿದ ಶಾಸಕ ಸತೀಶ್

ಸಂ.ಕ.ಸಮಾಚಾರ, ಬೆಂಗಳೂರು

ನಾಮಪತ್ರ ಸಲ್ಲಿಸುವ ಕೊನೆ ದಿನವಾದ ಸೋಮವಾರ ಕೆ.ಆರ್.ಪೇಟೆ ಅಕ್ಷರಶ: ರಣರಂಗವಾಗಿದ್ದು ಬಿಜೆಪಿ ಅಭ್ಯರ್ಥಿ, ಅನರ್ಹ ಶಾಸಕ ಕೆ.ಸಿ.ನಾರಾಯಣಗೌಡ ಹಾಗೂ ಸಚಿವ ಜೆ.ಸಿ.ಮಾಧುಸ್ವಾಮಿ ಮೇಲೆ ಚಪ್ಪಲಿ ತೂರಿದ ಪ್ರಸಂಗ ನಡೆದಿದೆ.

ನಾರಾಯಣಗೌಡ ನಾಮಪತ್ರ ಸಲ್ಲಿಸಲು ಮೆರವಣಿಗೆಯಲ್ಲಿ ಹೋಗುತ್ತಿದ್ದ ವೇಳೆ ಕೆಲವು ದುಷ್ಕರ್ಮಿಗಳು ಅವರತ್ತ ಚಪ್ಪಲಿ ಎಸೆದಿದ್ದಾರೆ. ಅವರ ಜತೆಗಿದ್ದ ಸಚಿವ ಮಾಧುಸ್ವಾಮಿ ಅವರತ್ತಲೂ ಚಪ್ಪಲಿಗಳು ತೂರಿ ಬಂದಿವೆ. ಈ ಸಂದರ್ಭದಲ್ಲಿ ಭಾರೀ ಗೊಂದಲ ಉಂಟಾಯಿತು. ಪರಿಸ್ಥಿತಿಯನ್ನು ತಿಳಿಗೊಳಿಸಲು ಪೊಲೀಸರು ಹರಸಾಹಸಪಡಬೇಕಾಯಿತು. ನಾರಾಯಣಸ್ವಾಮಿ ಜೆಡಿಎಸ್‌ಗೆ ದ್ರೋಹ ಮಾಡಿದ್ದಾರೆ ಎಂದು ಆರೋಪಿಸಿ ಕೆಲವರು ಅವರ ವಿರುದ್ಧ ಘೋಷಣೆ ಕೂಗಿದರು. ಗೊಂದಲ, ಪ್ರತಿಭಟನೆ ನಡುವೆ ನಾಮಪತ್ರ ಸಲ್ಲಿಸಿದ ನಾರಾಯಣಸ್ವಾಮಿ ಅವರಿಗೆ ಪೊಲೀಸರು ಭದ್ರತೆ ಒದಗಿಸಿದರು. ಪ್ರಕರಣದ ಬಗ್ಗೆ ಪ್ರತಿಕ್ರಿಯಿಸಿರುವ ಮಾಧುಸ್ವಾಮಿ ಬಿಜೆಪಿ ಹಾಗೂ ಜೆಡಿಎಸ್ ಅಭ್ಯರ್ಥಿಗಳಿಗೆ ನಾಮಪತ್ರ ಸಲ್ಲಿಸಲು ಒಂದೇ ಕಾಲವನ್ನು ನಿಗದಿ ಮಾಡಿದ್ದರಿಂದ ಗೊಂದಲ ಆಗಿದೆ. ಇದಕ್ಕೆ ಚುನಾವಣಾಧಿಕಾರಿ ಕಾರಣ ಎಂದು ಹರಿಹಾಯ್ದರು. ಈ ಪ್ರಕರಣ ಬಗ್ಗೆ ಬಿಜೆಪಿ ಚುನಾವಣಾಧಿಕಾರಿಗಳಿಗೆ ದೂರು ನೀಡಿದೆ.

ಗೋಕಾಕ್ ಕ್ಷೇತ್ರದಿಂದ ಯಮಕನಮರಡಿ ಶಾಸಕ ಸತೀಶ್ ಜಾರಕಿಹೊಳಿ ಪಕ್ಷೇತರರಾಗಿ ನಾಮಪತ್ರ ಸಲ್ಲಿಸಿರುವುದು ತೀವ್ರ ಅಚ್ಚರಿಗೆ ಕಾರಣವಾಗಿದೆ. ಇಲ್ಲಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಅವರ ಸಹೋದರ ಲಖನ್ ಹಾಗೂ ಬಿಜೆಪಿ ಅಭ್ಯರ್ಥಿಯಾಗಿ ಅನರ್ಹ ಶಾಸಕ ರಮೇಶ್ ಜಾರಕಿಹೊಳಿ ನಾಮಪತ್ರ ಸಲ್ಲಿಸಿದ್ದಾರೆ. ಇದರಿಂದ ಒಂದೇ ಕುಟುಂಬದ ಮೂವರು ಕಣಕ್ಕಿಳಿದಂತಾಗಿದೆ. ಆದರೆ ಸತೀಶ್ ನಾಮಪತ್ರ ಸಲ್ಲಿಕೆ ಹಿಂದಿನ ಲೆಕ್ಕಾಚಾರ ಏನು ಎನ್ನುವುದು ಕುತೂಹಲಕ್ಕೆ ಕಾರಣವಾಗಿದೆ. ನಾಮಪತ್ರ ಸಲ್ಲಿಸಲು ಕೊನೆ ದಿನವಾದ ಇಂದು ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು ಎಲ್ಲಾ ಕ್ಷೇತ್ರಗಳಲ್ಲಿ ಭರ್ಜರಿ ರೋಡ್ ಶೋ ನಡೆದಿದೆ.